ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು

ಆ) ಇಲ್ಲ. ಈ ಬಗ್ಗೆ ಯಾವುದೇ ದೂರು ಬಂದಿಲ್ಲ.

ಇ) ಹೌದು

ಈ) ಪರಿಶೀಲಿಸಲಾಗುವುದು.

ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ಪುನರ್ವಸತಿ ಕೇಂದ್ರಗಳಲ್ಲಿ ಶಾಲೆಗಳ ಪ್ರಾರಂಭ

2514 (3375) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ವಿಜಾಪುರ ಜಿಲ್ಲೆ ಬಸವನಬಾಗೇವಾಡಿ ವ್ಯಾಪ್ತಿಯಲ್ಲಿ ಬರುವ ಕೃಷ್ಣಾ ಮೇಲ್ದಂಡೆ ಯೋಜನೆಯ ಹಿನ್ನೀರಿನಲ್ಲಿ ಮುಳುಗಡೆಯಾಗುವ ಪ್ರದೇಶಗಳ ಪುನರ್‌ವಸತಿ ಕೇಂದ್ರಗಳಿಗೆ ಸರ್ಕಾರ ಹೊಸದಾಗಿ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಶಿಕ್ಷಕರ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಮಂಜೂರಾತಿ ನೀಡಿದೆಯೇ?

ಆ) ಮಂಜೂರಾತಿ ನೀಡಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು.

ಪ್ರಾಥಮಿಕ ಶಾಲೆ - 1

ಪ್ರೌಢ ಶಾಲೆಗಳು - 2

ಆ) 2001-2003 ನೇ ಶೈಕ್ಷಣಿಕ ವರ್ಷದಿಂದ

ಬಿಜಾಪುರ ಜಿಲ್ಲೆಯಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳ ಭರ್ತಿ

2515 (3376) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಆ) ರಾಜ್ಯದಲ್ಲಿ ಖಾಲಿಯಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಸಂಖ್ಯೆ?

ಆ) ಇದರಲ್ಲಿ ಬಿಜಾಪುರ ಜಿಲ್ಲೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ? (ವಿವರ ನೀಡುವುದು)

ಇ) ಖಾಲಿ ಇದ್ದಲ್ಲಿ, ಇವುಗಳ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಆ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಸಂಖ್ಯೆ ೧೫೫೦೦ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಇರುವ ಶಿಕ್ಷಕರ ಸಂಖ್ಯೆ ೨೦೦೦.

ಆ) ಬಿಜಾಪುರ ಜಿಲ್ಲೆಯಲ್ಲಿ ಖಾಲಿ ಇರುವ ಶಿಕ್ಷಕರ ಸಂಖ್ಯೆ :

೧) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ೫೮೭

೨) ಸರ್ಕಾರಿ ಪ್ರೌಢ ಶಾಲೆ ೩೩

ಇ) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧದಲ್ಲಿ ಅಂತಿಮ ಹಂತದಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿ ತಿದ್ದುಪಡಿ ಆದೇಶ ಹೊರಬಂದ ನಂತರ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು. ತುಂಬಲು ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ.

ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಶಾಲಾ ಕೊಠಡಿಗಳ ನಿರ್ಮಾಣ

2516(3377) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ (ಬಸವನ ಬಾಗೇವಾಡಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ. ವಿಜಾಪುರ ಜಿಲ್ಲೆ ಬಸವನ ಬಾಗೇವಾಡಿ ಮತಕ್ಷೇತ್ರ ವ್ಯಾಪ್ತಿಯಲ್ಲಿ ಇರುವ ಶಾಲೆಗಳಿಗೆ ಕೊರತೆ ಇರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ;

ಆ. ಸದರಿ ಶಾಲೆಗಳ ನಿರ್ಮಾಣಕ್ಕೆ ಸರ್ಕಾರ ಹಣ ಒದಗಿಸಿದೆಯೆ; ಹಾಗಿದಲ್ಲಿ, ನಿರ್ಮಾಣದ ವೆಚ್ಚವೆಷ್ಟು ;

ಇ. ಎಲ್ಲೆಲ್ಲಿ ಶಾಲಾ ಕೊಠಡಿಗಳನ್ನು ನಿರ್ಮಿಸಬೇಕಾಗಿದೆ; (ವಿವರ ನೀಡುವುದು)

ಈ) ಈ ನಿರ್ಮಾಣ ಕಾಮಗಾರಿಯನ್ನು ಎಂದಿನಿಂದ ಕೈಗೊಳ್ಳಲಾಗುವುದು?